# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮಾನ್ಯ ಮುಖ್ಯಮಂತ್ರಿಯವರ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ: 224ರಲ್ಲಿ ಘೋಷಿಸಿರುವಂತೆ ಬೃಹತ್ ಬೆಂಗಳೂರು ಮಹಾನಗರಪಾಲಿಕೆಯೂ ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಮಾಸಿಕ ರೂ.2000/-ಗಳ ಸಂಕಷ್ಟ ಭತ್ಯೆಯನ್ನು (Hardship Allowances) ನೀಡುವ ಕುರಿತು.

**ಓದಲಾಗಿದೆ:** 1) 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ ಸಂಖ್ಯೆ: 224.
2) ಸರ್ಕಾರದ ಆದೇಶ ಸಂಖ್ಯೆ:ನಅಇ 147 ಎಸ್.ಎಫ್.ಸಿ 2022, ದಿನಾಂಕ: 08-04-2022.

**ಪ್ರಸ್ತಾವನೆ:**

ನಗರಾಭಿವೃದ್ಧಿ ಇಲಾಖೆಗೆ ಸಂಬಂಧಿಸಿದಂತೆ 2022-23ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತಿಗಳು ಕಂಡಿಕೆ ಸಂಖ್ಯೆ: 224 ರಲ್ಲಿ ಘೋಷಿಸಿರುವಂತೆ ಪೌರ ಕಾರ್ಮಿಕರು ಕ್ಲಿಷ್ಟಕರ ಹಾಗೂ ಅಪಾಯಕರ ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸುವುದನ್ನು ಗಮನದಲ್ಲಿಟ್ಟುಕೊಂಡು, ಮೊಟ್ಟಮೊದಲ ಬಾರಿಗೆ ಪೌರಕಾರ್ಮಿಕರಿಗೆ ಮಾಸಿಕ ರೂ.2000/-ಗಳ ಸಂಕಷ್ಟ ಭತ್ಯೆಯನ್ನು (Hardship Allowances) ನೀಡುವ ಕುರಿತು ಮೇಲೆ ಓದಲಾದ (2)ರ ಆದೇಶದಲ್ಲಿ ಅನುಮೋದನೆ ನೀಡಲಾಗಿತ್ತು.

ಪೌರಕಾರ್ಮಿಕರು ಕ್ಲಿಷ್ಟಕರ ಹಾಗೂ ಅಪಾಯಕರ ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸುವುದನ್ನು ಗಮನದಲ್ಲಿಟ್ಟುಕೊಂಡು, ಮೊಟ್ಟಮೊದಲ ಬಾರಿಗೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ (ಬಿಬಿಎಂಪಿ ಹೊರತುಪಡಿಸಿ) ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಮಾಸಿಕ ರೂ.2,000/-ಗಳ ಸಂಕಷ್ಟ ಭತ್ಯೆಯನ್ನು (Hardship Allowances) ಲೆಕ್ಕ ಶೀರ್ಷಿಕೆ:3604-00-191/192/193-2-32 ರಿಂದ ಭರಿಸಲು ಆರ್ಥಿಕ ಇಲಾಖೆಯು ಅನುಮತಿಸಿರುತ್ತದೆ.

ಮುಂದುವರೆದು, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯಡಿ ಕಾರ್ಯನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಸಂಕಷ್ಟ ಭತ್ಯೆಯನ್ನು ಬೃಹತ್ ಬೆಂಗಳೂರು ಮಹಾನಗರಪಾಲಿಕೆಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು ಎಂದು ಮೇಲೆ ಓದಲಾದ (2)ರ ಆದೇಶದಲ್ಲಿ ತಿಳಿಸಲಾಗಿತ್ತು.

ಬೃಹತ್ ಬೆಂಗಳೂರು ಮಹಾನಗರಪಾಲಿಕೆಯು ಮಾಸಿಕ ರೂ.2,000/-ಗಳ ಸಂಕಷ್ಟ ಭತ್ಯೆಯನ್ನು (Hardship Allowance) 8ನೇ ಏಪ್ರೀಲ್ 2022 ರಿಂದ ಅನ್ವಯವಾಗುವಂತೆ ಪಾಲಿಕೆಯ ಎಲ್ಲಾ ಪೌರಕಾರ್ಮಿಕರಿಗೆ ನೀಡುವಂತಾಗಲು ಪಾಲಿಕೆಗೆ ವಾರ್ಷಿಕ ಅಂದಾಜು ರೂ.40.00 ಕೋಟಿಗಳ ಅನುದಾನದ ಅವಶ್ಯಕತೆ ಇರುತ್ತದೆ.

ಈ ಹಿನ್ನೆಲೆಯಲ್ಲಿ, ಸದರಿ ಮಾಸಿಕ ರೂ.2,000/-ಗಳ ಸಂಕಷ್ಟ ಭತ್ಯೆಯನ್ನು (Hardship Allowance) ಎಲ್ಲಾ ಪೌರಕಾರ್ಮಿಕರಿಗೆ ನೀಡಲು ತಗಲುವ ಅನುದಾನವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಯಡಿ ಭರಿಸಿ ಪಾವತಿಸಲು ಅನುದಾನ ಬಿಡುಗಡೆಗಾಗಿ ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ ರವರು ಕೋರಿರುತ್ತಾರೆ.

ಅದರಂತೆ, ಪ್ರಸ್ತಾವನೆಯನ್ನು ಕೂಲಕಂಷವಾಗಿ ಸರ್ಕಾರದಲ್ಲಿ ಪರಿಶೀಲಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ನಅಇ 143 ಎಸ್.ಎಫ್.ಸಿ 2022,**
**ಬೆಂಗಳೂರು, ದಿನಾಂಕ: 04-08-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ವಯ, ಬೃಹತ್ ಬೆಂಗಳೂರು ಮಹಾನಗರಪಾಲಿಕೆಯೂ ಸೇರಿದಂತೆ ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರುಗಳಿಗೆ ಮಾಸಿಕ ರೂ.2,000/- ಸಂಕಷ್ಟ ಭತ್ಯೆಯನ್ನು (Hardship Allowances) ನೀಡಲು ಅನುಮೋದನೆ ನೀಡಿದೆ.

ಬೃಹತ್ ಬೆಂಗಳೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರುಗಳಿಗೆ ಮಾಸಿಕ ರೂ.2,000/- ಸಂಕಷ್ಟ ಭತ್ಯೆಯನ್ನು ನೀಡಲು 2022-23ನೇ ಸಾಲಿನ ಲೆಕ್ಕ ಶೀರ್ಷಿಕೆ "3604-00-191-2-18 ಬೆಂಗಳೂರು (ನಗರ)-032-ಬಂಡವಾಳ ಆಸ್ತಿಗಳ ಸೃಜನೆಗೆ ನಿಗಧಿಪಡಿಸಿರುವ ಅನುದಾನದಿಂದ ಭರಿಸಲು ಅನುಮತಿಸಿದೆ.

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ:ಎಫ್.ಡಿ 86 ಬಿಆರ್‌ಎಸ್ 2022, ದಿನಾಂಕ: 21-07-2022 ರನ್ವಯ ಹಾಗೂ ಆರ್ಥಿಕ ಇಲಾಖೆಯ ಹಿಂಬರಹ ಸಂಖ್ಯೆ: ಆಇ 253 ವೆಚ್ಚ-9/2022, ದಿನಾಂಕ:25-07-2022ರಲ್ಲಿ ನೀಡಿರುವ ಸಹಮತಿಯನ್ವಯ ಮತ್ತು ದಿನಾಂಕ:01-07-2022 ರಂದು ನಡೆದ ಸಚಿವ ಸಂಪುಟದ ಸಭೆಯ ಕಾರ್ಯಸೂಚಿಯಲ್ಲಿನ ಕ್ರಮ ಸಂಖ್ಯೆ:21 ಮತ್ತು ಪ್ರಕರಣ ಸಂಖ್ಯೆ:ಸಿ/287/2022ರಲ್ಲಿ ಕೈಗೊಂಡ ನಿರ್ಣಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಕೆ.ಎಸ್ ಶಂಕರ್)**
ಜಂಟಿ ನಿರ್ದೇಶಕರು (ಯೋಜನೆ) ಹಾಗೂ
ಪದನಿಮಿತ್ತ ಉಪ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ

**ಇವರಿಗೆ:**
1. ಮಹಾಲೇಖಪಾಲರು (ಜಿ & ಎಸ್.ಎಸ್.ಎ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರ ಕಛೇರಿ (ಜಿ & ಆರ್.ಎಸ್.ಎ), ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರ ಕಛೇರಿ (ಎ & ಇ), ಕರ್ನಾಟಕ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರಪಾಲಿಕೆ, ಬೆಂಗಳೂರು.
5. ಸರ್ಕಾರದ ಜಂಟಿ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ (ಪ್ರಕರಣ ಸಂಖ್ಯೆ:ಸಿ/287/2022)
6. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ(ಬಿಬಿಎಂಪಿ ಶಾಖೆ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿಯನ್ನು:**
1. ಸರ್ಕಾರದ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ.
2. ಜಂಟಿ ನಿರ್ದೇಶಕರು (ಯೋಜನೆ), ನಗರಾಭಿವೃದ್ಧಿ ಇಲಾಖೆ, ವಿಕಾಸಸೌಧ.